**MINISTER FOR FOOD AND CIVIL SUPPLIES:**

*DEMAND NO. 20 - FOOD AND CIVIL SUPPLIES*

Sir, on the recommendation of the Governor, I beg to move :

"That a sum not exceeding Rs. 1,76,53,03,000 on Revenue Account and Rs. 20,00,000 on Capital Account inclusive of the sum granted "on account" be granted to the Government to defray the charges which will come in course of payment during the financial year endng 31st day of March 1998 in respect of "Food and Civil Supplies".

**MINISTER OF STATE FOR TOURISM, KANNADA AND CULTURE:**

*DEMAND NO. 13 - ART, CULTURE AND DEVELOPMENT OF KANNADA*

Sir, on the recommendation of the Governor, I beg to move :

"That a sum not exceeding Rs. 18,42,40,000 on Revenue Account inclusive of the sum granted "on account" be granted to the Government to defray the charges which will come in course of payment during the financial year ending 31st day of March 1998 in respct of "Art, Culture and Development of Kannada".

*DEMAND NO. 27 - TOURISM*

Sir, on the recommendation of the Governor, I beg to move :

"That a sum not exceeding Rs. 23,42,42,000 on Revenue Account inclusive of the sum granted "on account" be granted to the Government to defray the charges which will come in course of payment during the financial year ending 31st day of March 1998 in respect of "Tourism".

ಅಧ್ಯಕ್ಷರು : ಉಳಿದ ಬೇಡಿಕೆಗಳನ್ನು ಸಭೆಯ ಮುಂದೆ ಮಂಡಿಸುವುದು.

**ಆ) 1997-98ನೇ ಸಾಲಿನ ಅನುದಾನ ಬೇಡಿಕೆಗಳ ಮಂಡನೆ.**

(ಬೇಡಿಕೆಗಳ ಸಂಖ್ಯೆ 27, 37, 38, 40, 47, 51, 57, 58, 62, 33, 34, 21, 29, 28, 25, 10, 23, 35, 36, 50, 59, 15, 16, 56, 4, 46, 2, 1, 3 , 12, 52, 53, 8, 7, 9, 61, 42, 60)

**ಶ್ರೀ ಜೆ. ಹೆಚ್. ಪಟೇಲ್ (ಮುಖ್ಯಮಂತ್ರಿಗಳು)** : ಮಾನ್ಯ ಅಧ್ಯಕ್ಷರೆ.

*ಅಭಿಯಾಚನೆ ಕ್ರಮಾಂಕ 22 - ರಾಜ್ಯ ಅಬಕಾರಿ*

ಶ್ರೀಯುತರೇ,

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1998ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ರಾಜ್ಯ ಅಬಕಾರಿಗೆ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 30,74,94,000 ರೂ. ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು (ಮಂಡಿಸಲು) ನಾನು ಬಿನ್ನವಿಸಿಕೊಳ್ಳುತ್ತೇನೆ.

*ಅಭಿಯಾಚನೆ ಕ್ರಮಾಂಕ 37 - ರಾಜ್ಯಪಾಲರು, ಮಂತ್ರಿಗಳು ಮತ್ತು ಲೋಕಸೇವಾ ಆಯೋಗ*

ಶ್ರೀಯುತರೇ,

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1998ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ರಾಜ್ಯಪಾಲರು, ಮಂತ್ರಿಗಳು ಮತ್ತು ಲೋಕಸೇವಾ ಆಯೋಗಗಳಿಗೆ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 6,52,66,000 ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು (ಮಂಡಿಸಲು) ನಾನು ಬಿನ್ನವಿಸಿಕೊಳ್ಳುತ್ತೇನೆ.

*ಅಭಿಯಾಚನೆ ಕ್ರಮಾಂಕ 38 - ಸಚಿವಾಲಯ*

ಶ್ರೀಯುತರೇ,

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1998ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಸಚಿವಾಲಯಕ್ಕೆ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 42,98,32,000 ರೂ. ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು (ಮಂಡಿಸಲು) ನಾನು ಬಿನ್ನವಿಸಿಕೊಳ್ಳುತ್ತೇನೆ.

*ಅಭಿಯಾಚನೆ ಕ್ರಮಾಂಕ 40 ಸಾಮಾನ್ಯ ಆಡಳಿತ ಇತ್ಯಾದಿ*

ಶ್ರೀಯುತರೇ,

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1998ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಸಾಮಾನ್ಯ ಆಡಳಿತ ಇತ್ಯಾದಿ"ಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 30,74,46,000 ರೂ. ಗಳಿಗಿಂತ ಮೀರದ ಮೊತ್ತವನ್ನು

(ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು (ಮಂಡಿಸಲು) ನಾನು ಬಿನ್ನವಿಸಿಕೊಳ್ಳುತ್ತೇನೆ.

*ಅಭಿಯಾಚನೆ ಕ್ರಮಾಂಕ 47 - ವಿದ್ಯುಚ್ಛಕ್ತಿ ಯೋಜನೆಗಳು*

ಶ್ರೀಯುತರೇ,

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1998ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ವಿದ್ಯುಚ್ಛಕ್ತಿ ಯೋಜನೆಗಳಿಗೆ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 2,24,75,99,000 ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮೂಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು (ಮಂಡಿಸಲು) ನಾನು ಬಿನ್ನವಿಸಿಕೊಳ್ಳುತ್ತೇನೆ.

*ಅಭಿಯಾಚನೆ ಕ್ರಮಾಂಕ 51 - ವಕ್ಫ್*

ಶ್ರೀಯುತರೇ,

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1998ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ವಕ್ಫ್‌ಗೆ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 4,57,75,000 ರೂ. ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು (ಮಂಡಿಸಲು) ನಾನು ಬಿನ್ನವಿಸಿಕೊಳ್ಳುತ್ತೇನೆ.

ಶ್ರೀ ಕೆ. ಎಂ. ಕೃಷ್ಣಾರೆಡ್ಡಿಯವರ ಪರವಾಗಿ ಶ್ರೀ ಕೆ.ಎನ್. ನಾಗೇಗೌಡ ಅವರು ಮಂಡಿಸಿದರು.

**ಸಮಾಜ ಕಲ್ಯಾಣ ಸಚಿವರು**

*ಅಭಿಯಾಚನೆ ಕ್ರಮಾಂಕ 57 - ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ ಕಲ್ಯಾಣ*

ಶ್ರೀಯುತರೇ,

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1998ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ ಕಲ್ಯಾಣ" ಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 2,53,37,24,000 ರೂ. ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 19,00,00,000 ರೂ. ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು (ಮಂಡಿಸಲು) ನಾನು ಬಿನ್ನವಿಸಿಕೊಳ್ಳುತ್ತೇನೆ.

ಶ್ರೀಮತಿ ವಿಮಲಾಬಾಯಿದೇಶಮುಖ್ (ಮಹಿಳಾ ಮತ್ತು ಮಕ್ಕಳ ಕಲ್ಯಾಣ ರಾಜ್ಯ ಸಚಿವರು) :

*ಅಭಿಯಾಚನೆ ಕ್ರಮಾಂಕ 58 - ಮಹಿಳಾ ಮತ್ತು ಮಕ್ಕಳ ಕಲ್ಯಾಣ*

ಶ್ರೀಯುತರೇ,

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 21-3-1998 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಮಹಿಳಾ ಮತ್ತು ಮಕ್ಕಳ ಕಲ್ಯಾಣ"ಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 3,31,23,55,000 ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 1,00,00,000 ರೂ. ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು (ಮಂಡಿಸಲು) ನಾನು ಬಿನ್ನವಿಸಿಕೊಳ್ಳುತ್ತೇನೆ.

ಶ್ರೀ ಮಾಲೀಕಯ್ಯ ಗುತ್ತೇದಾರ್ (ಹಿಂದುಳಿದ ವರ್ಗದವರು ಮತ್ತು ಅಲ್ಪ ಸಂಖ್ಯಾತರ ಸಚಿವರು) ಅವರ ಪರವಾಗಿ ಶ್ರೀ ಕೆ.ಎನ್ ನಾಗೇಗೌಡ (ಭಾರಿ ನೀರಾವರಿ ಸಚಿವರು ಮಂಡಿಸಿದರು).

*ಅಭಿಯಾಚನೆ ಕ್ರಮಾಂಕ 62 - ಹಿಂದುಳಿದ ವರ್ಗಗಳು ಮತ್ತು ಅಲ್ಪ ಸಂಖ್ಯಾತರು*

ಶ್ರೀಯುತರೇ,

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1998ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಹಿಂದುಳಿದ ವರ್ಗಗಳು ಮತ್ತು ಅಲ್ಪ ಸಂಖ್ಯಾತರು ಗೆ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 84,77,99,000 ರೂ. ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು (ಮಂಡಿಸಲು) ನಾನು ಬಿನ್ನವಿಸಿಕೊಳ್ಳುತ್ತೇನೆ.

ದಿನಾಂಕ : 30ನೇ ಜುಲೈ 1997 ಕಾರ್ಯದರ್ಶಿ,
ಬೆಂಗಳೂರು ಕರ್ನಾಟಕ ವಿಧಾನ ಮಂಡಲ,

6.20 ಪಿ.ಎಂ.

*ಅನುದಾನ ಬೇಡಿಕೆ ಸಂಖ್ಯೆ : 33 - ಸಣ್ಣ ನೀರಾವರಿ*

ಶ್ರೀ ತಿಪ್ಪೇಸ್ವಾಮಿ (ಸಣ್ಣ ನೀರಾವರಿ ಸಚಿವರು) : ಮಾನ್ಯ ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1998ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಸಣ್ಣ ನೀರಾವರಿಗೆ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 53,13,13,000 ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 83,10,00,000 ರೂ. ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

*ಬೇಡಿಕೆ ಸಂಖ್ಯೆ - 34 : ಭಾರಿ ಮತ್ತು ಮಧ್ಯಮ ನೀರಾವರಿ*

ಶ್ರೀ ಕೆ. ಎನ್. ನಾಗೇಗೌಡ (ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು) : ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1998ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಭಾರಿ ಮತ್ತು ಮಧ್ಯಮ ನೀರಾವರಿ" ಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 6,51,37,45,000 ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 8,08,43,31,000 ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

*ಬೇಡಿಕೆ ಸಂಖ್ಯೆ-21 : ಅರಣ್ಯ*

ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ (ಅರಣ್ಯ ಸಚಿವರು) : ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1998 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಅರಣ್ಯ" ಕ್ಕೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 1,99,08,38,000 ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 5,00,000 ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

*ಬೇಡಿಕೆ ಸಂಖ್ಯೆ-29 ಆರೋಗ್ಯ ಮತ್ತು ಕು.ಕ. ಸೇವೆಗಳು*

ಡಾ: ಎಂ. ಶಂಕರನಾಯಕ್ : (ವೈದ್ಯಕೀಯ ಶಿಕ್ಷಣ ಸಚಿವರು) : ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1998 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳಿಗೆ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 5,94,64,92,000 ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

*ಬೇಡಿಕೆ ಸಂಖ್ಯೆ : 28 : ವೈದ್ಯಕೀಯ ಶಿಕ್ಷಣ*

ಡಾ: ಎಂ. ಶಂಕರನಾಯಕ (ವೈದ್ಯಕೀಯ ಶಿಕ್ಷಣ ಸಚಿವರು) : ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1998 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ವೈದ್ಯಕೀಯ ಶಿಕ್ಷಣ"ಕ್ಕೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 1,68,33,63,000 ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

*ಬೇಡಿಕೆ ಸಂಖ್ಯೆ : 25 : ಬಂದೀ ಖಾನೆಗಳು, ಅಗ್ನಿಶಾಮಕ ಮತ್ತು ಸೈನಿಕ ಕಲ್ಯಾಣ ಇತ್ಯಾದಿ*

ಡಾ॥ ಎಂ. ಶಂಕರನಾಯಕ್ (ವೈದ್ಯಕೀಯ ಶಿಕ್ಷಣ ಸಚಿವರು) (ಬಂದೀಖಾನೆಗಳು, ಅಗ್ನಿ ಶಾಮಕ ಮತ್ತು ಸೈನಿಕ ಕಲ್ಯಾಣ ಸಚಿವರ ಪರವಾಗಿ) : ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ

31-3-1998 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಬಂದೀಖಾನೆಗಳು, ಅಗ್ನಿ ಶಾಮಕ ಮತ್ತು ಸೈನಿಕ ಕಲ್ಯಾಣ ಇತ್ಯಾದಿ" ಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 50, 91, 73,000 ರೂ. ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 50,00,000 ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

*ಬೇಡಿಕೆ ಸಂಖ್ಯೆ : 10 : ಲೇಖನ ಸಾಮಗ್ರಿ ಮತ್ತು ಮುದ್ರಣ*

ಡಾ॥ ಎಂ. ಶಂಕರನಾಯಕ್ (ವೈದ್ಯಕೀಯ ಶಿಕ್ಷಣ ಸಚಿವರು) (ವಯಸ್ಕರ ಶಿಕ್ಷಣ ಮತ್ತು ಸಾರ್ವಜನಿಕ ಗ್ರಂಥಾಲಯ ಸಚಿವರ ಪರವಾಗಿ) : ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1998 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಲೇಖನ ಸಾಮಗ್ರಿ ಮತ್ತು ಮುದ್ರಣ ಇತ್ಯಾದಿ" ಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 26,30,43,000 ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

*ಬೇಡಿಕೆ ಸಂಖ್ಯೆ : 23 : ಸಾರಿಗೆ ಸೇವೆಗಳು*

ಶ್ರೀ ಕೆ.ಎನ್. ನಾಗೇಗೌಡ (ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು) (ಸಾರಿಗೆ ಸಚಿವರ ಪರವಾಗಿ) : ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1998 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಸಾರಿಗೆ ಸೇವೆ" ಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 72,99,20,000 ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 15,00,000 ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

*ಬೇಡಿಕೆ ಸಂಖ್ಯೆ - 35, ರಾಜ್ಯ ವಿಧಾನಮಂಡಲ*

ಶ್ರೀ ಕೆ. ಎನ್. ನಾಗೌಗೌಡ : (ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು) (ಕಾನೂನು ಸಚಿವರ ಪರವಾಗಿ) : ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1998 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ರಾಜ್ಯ ವಿಧಾನಮಂಡಲ"ಕ್ಕೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 17,86,90,000 ರೂ. ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

*ಬೇಡಿಕೆ ಸಂಖ್ಯೆ - 36 : ನ್ಯಾಯ ಪರಿಪಾಲನೆ*

ಶ್ರೀ ಕೆ. ಎನ್. ನಾಗೇಗೌಡ (ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು) (ಕಾನೂನು ಸಚಿವರ ಪರವಾಗಿ) : ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1998 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ನ್ಯಾಯ ಪರಿಪಾಲನೆ"ಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು

ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 80,20,82,000ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

*ಬೇಡಿಕೆಸಂಖ್ಯೆ -50 : ಮತೀಯ ಮತ್ತು ಧರ್ಮದಾಯ ಸಂಸ್ಥೆಗಳು ಇತ್ಯಾದಿ*

ಶ್ರೀ ಕೆ. ಎನ್. ನಾಗೇಗೌಡ (ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು) (ಮುಜರಾಯಿ ಸಚಿವರ ಪರವಾಗಿ) : ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1998 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಮತೀಯ ಮತ್ತು ಧರ್ಮದಾಯ ಸಂಸ್ಥೆಗಳು ಇತ್ಯಾದಿ"ಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 13,62,76,000 ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

*ಬೇಡಿಕೆ ಸಂಖ್ಯೆ - 59 : ವಿಜ್ಞಾನ ಮತ್ತು ತಂತ್ರಜ್ಞಾನ ಜೀವಿ ಪರಿಸ್ಥಿತಿ ಶಾಸ್ತ್ರ ಮತ್ತು ಪರಿಸರ*

ಶ್ರೀ ಕೆ. ಎನ್. ನಾಗೇಗೌಡ (ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು) (ವಿಜ್ಞಾನ ಮತ್ತು ಯಂತ್ರ ಕಲೆ ಹಾಗೂ ಪರಿಸರ ರಾಜ್ಯ ಸಚಿವರ ಪರವಾಗಿ) : ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1998 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ವಿಜ್ಞಾನ ಮತ್ತು ತಂತ್ರಜ್ಞಾನ ಜೀವಿ ಪರಿಸ್ಥಿತಿ ಮತ್ತು ಪರಿಸರ ಕ್ಕೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 9,33,44,000 ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

*ಬೇಡಿಕೆ ಸಂಖ್ಯೆ -15 : ವರಮಾನ, ವೃತ್ತಿಗಳು, ಮಾರಾಟ ಮತ್ತು ಇತರೆ ಸೇವೆಗಳ ಮೇಲಿನ ತೆರಿಗೆಗಳು*

ಶ್ರೀ ಸಿದ್ಧರಾಮಯ್ಯ (ಉಪ ಮುಖ್ಯಮಂತ್ರಿಗಳು) : ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1998 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ವರಮಾನ, ವೃತ್ತಿಗಳು, ಮಾರಾಟ ಮತ್ತು ಇತರ ಸೇವೆಗಳ ಮೇಲಿನ ತೆರಿಗೆಗಳಿಗೆ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 66,20,33,000 ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

*ಬೇಡಿಕೆ ಸಂಖ್ಯೆ - 16 : ವಿಶ್ರಾಂತಿವೇತನ ಮತ್ತು ಇತರ ನಿವೃತ್ತಿ ಸೌಲಭ್ಯಗಳು*

ಶ್ರೀ ಸಿದ್ಧರಾಮಯ್ಯ (ಉಪ ಮುಖ್ಯಮಂತ್ರಿಗಳು) : ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1998 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ವಿಶ್ರಾಂತಿವೇತನ ಮತ್ತು ಇತರ ನಿವೃತ್ತಿ ಸೌಲಭ್ಯಗಳಿಗೆ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 873,04,00,000 ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

*ಬೇಡಿಕೆ ಸಂಖ್ಯೆ - 56 : ಕಾರ್ಮಿಕ ಮತ್ತು ಉದ್ಯೋಗ*

ಶ್ರೀ ಸಿದ್ಧರಾಮಯ್ಯ (ಉಪಮುಖ್ಯಮಂತ್ರಿಗಳು) : ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1998 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಕಾರ್ಮಿಕ ಮತ್ತು ಉದ್ಯೋಗ"ಕ್ಕೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 78,56,99,000 ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

*ಬೇಡಿಕೆ ಸಂಖ್ಯೆ - 4 : ಮೀನುಗಾರಿಕೆ*

ಶ್ರೀ ಜಯಪ್ರಕಾಶ್ ಹೆಗಡೆ (ಬಂದರು ಮತ್ತು ಮೀನುಗಾರಿಕೆ ಸಚಿವರು) : ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1998 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಮೀನುಗಾರಿಕೆಗೆ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 24,66,63,000 ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 5,59,00,000 ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

*ಬೇಡಿಕೆ ಸಂಖ್ಯೆ - 46 : ರೇವು ಮತ್ತು ಜಲಸಾರಿಗೆ ಸೇವೆಗಳು*

ಶ್ರೀ ಜಯಪ್ರಕಾಶ್ ಹೆಗಡೆ (ಬಂದರು ಮತ್ತು ಮೀನುಗಾರಿಕೆ ಸಚಿವರು) : ಅಧ್ಯಕ್ಷರೇ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1998 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ರೇವು ಮತ್ತು ಜಲಸಾರಿಗೆ ಸೇವೆಗಳಿಗಾಗಿ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 3,94,64,000 ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 5,32,00,000 ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

*ಬೇಡಿಕೆ ಸಂಖ್ಯೆ - 2 : ತೋಟಗಾರಿಕೆ*

ಶ್ರೀ ಡಿ. ಟಿ. ಜಯಕುಮಾರ್ (ತೋಟಕಾರಿಗೆ ಸಚಿವರು) : ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1998 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ತೋಟಗಾರಿಕೆ" ಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 83,06,09,000 ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 1,50,00,000 ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

*ಬೇಡಿಕೆ ಸಂಖ್ಯೆ - 1 : ವ್ಯವಸಾಯ*

ಶ್ರೀ ಡಿ. ಟಿ. ಜಯಕುಮಾರ್ (ತೋಟಗಾರಿಕೆ ಸಚಿವರು) (ಕೃಷಿ ಸಚಿವರ ಪರವಾಗಿ) : ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1997 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ

"ವ್ಯವಸಾಯಕ್ಕೆ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 2,71,46,46,000 ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 8,70,77,000 ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

*ಬೇಡಿಕೆ ಸಂಖ್ಯೆ-3 : ಪಶುಸಂಗೋಪನೆ*

ಶ್ರೀ ಡಿ.ಟಿ. ಜಯಕುಮಾರ್ (ತೋಟಗಾರಿಗೆ ಸಚಿವರು) (ಪಶುಸಂಗೋಪನಾ ಸಚಿವರ ಪರವಾಗಿ) : ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗ 31-3-1998 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಪಶುಸಂಗೋಪನೆಗೆ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 1,24,10,66,000 ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

*ಬೇಡಿಕೆ ಸಂಖ್ಯೆ - 12 : ಯುವಜನ ಸೇವೆ*

ಶ್ರೀ ಅಜಯಕುಮಾರ್ ಸರನಾಯಕ್ (ಯುವಜನ ಸೇವೆ ಮತ್ತು ಕ್ರೀಡಾ ಸಚಿವರು) : ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗ 31-3-1998 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಯುವಜ"ನ ಸೇವೆಗಳಿಗೆ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 43,31,79,000 ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

*ಬೇಡಿಕೆ ಸಂಖ್ಯೆ - 52 : ಸಹಕಾರ*

ಶ್ರೀ ಅಜಯಕುಮಾರ್ ಸರ್‌ನಾಯಕ್ (ಯುವಜನ ಸೇವೆ ಮತ್ತು ಕ್ರೀಡಾ ಸಚಿವರು ) (ಸಹಕಾರ ಸಚಿವರ ಪರವಾಗಿ) : ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1998 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಸಹಕಾರ" ಕ್ಕೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 47,90,41,000 ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 19,45,50,000 ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

*ಬೇಡಿಕೆ ಸಂಖ್ಯೆ - 53 : ಕ್ರಮಪಡಿಸಿದ ಮಾರುಕಟ್ಟೆಗಳು*

ಶ್ರೀ ಅಜಯಕುಮಾರ್ ಸರ್‌ನಾಯಕ್ (ಯುವಜನ ಸೇವೆ ಮತ್ತು ಕ್ರೀಡಾ ಸಚಿವರು) (ಕೃಷಿ ಮಾರುಕಟ್ಟೆ ಸಚಿವರ ಪರವಾಗಿ) : ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1998 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಕ್ರಮಪಡಿಸಿದ ಮಾರುಕಟ್ಟೆಗಳಿಗಾಗಿ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ರಾಜಸ್ವ ಖಾತೆಯಲ್ಲಿ 23,93,57,000 ರೂ.ಗಳಿಗಿಂತ

ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

*ಬೇಡಿಕೆ ಸಂಖ್ಯೆ - 8 : ರೇಷ್ಮೆ ವ್ಯವಸಾಯ*

ಶ್ರೀ ಎಂ. ವರದೇಗೌಡ (ರೇಷ್ಮೆ ಸಚಿವರು) : ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1998 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ರೇಷ್ಮೆ ವ್ಯವಸಾಯಕ್ಕೆ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 1,28,84,78,000 ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 3,00,00,000 ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

*ಬೇಡಿಕೆ ಸಂಖ್ಯೆ - 7 : ಚಿಕ್ಕಪುಟ್ಟ ಉದ್ಯಮಗಳು*

ಶ್ರೀ ಎಂ. ವರದೇಗೌಡ (ರೇಷ್ಮೆ ಸಚಿವರು) (ಸಣ್ಣ ಪ್ರಮಾಣದ ಕೈಗಾರಿಕೆ ಸಚಿವರ ಪರವಾಗಿ): ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1998 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಚಿಕ್ಕಪುಟ್ಟ ಉದ್ಯಮಗಳಿಗೆ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ರಾಜಸ್ವ ಖಾತೆಯಲ್ಲಿ 85,54,93,000 ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 11,75,00,000 ರೂ. ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

*ಬೇಡಿಕೆ ಸಂಖ್ಯೆ - 9 : ಸಕ್ಕರೆ*

ಶ್ರೀ ಉಮೇಶ್ ಕತ್ತಿ (ಸಕ್ಕರೆ ಸಚಿವರು) : ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1998 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಸಕ್ಕರೆ" ಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 10,25,19,000 ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 4,50,00,000 ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

*ಬೇಡಿಕೆ ಸಂಖ್ಯೆ - 61 : ಜವಳಿ*

ಶ್ರೀ ಉಮೇಶ್ ಕತ್ತಿ (ಸಕ್ಕರೆ ಸಚಿವರು) (ಜವಳಿ ಸಚಿವರ ಪರವಾಗಿ) : ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1998 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಜವಳಿ" ಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 21,33,23,000 ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 4,62,70,000 ರೂ.ಗಳಿಗಿಂತ

ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

*ಬೇಡಿಕೆ ಸಂಖ್ಯೆ - 42 : ಹಿಂದುಳಿದ ಪ್ರದೇಶಗಳ ಅಭಿವೃದ್ಧಿ ಇತ್ಯಾದಿ*

ಶ್ರೀ ಕೆ. ವೆಂಕಟೇಶ (ಪ್ರದೇಶಾಭಿವೃದ್ಧಿ ಮತ್ತು ಕಾಡಾ ರಾಜ್ಯ ಸಚಿವರು) : ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1998 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಹಿಂದುಳಿದ ಪ್ರದೇಶಗಳ ಅಭಿವೃದ್ಧಿ ಇತ್ಯಾದಿಗೆ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ 93,98,00,000 ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ನಾನು ಕೋರುತ್ತೇನೆ.

*ಬೇಡಿಕೆ ಸಂಖ್ಯೆ - 60 : ಮಲೆನಾಡು ಪ್ರದೇಶ ಅಭಿವೃದ್ಧಿ*

ಶ್ರೀ ಕೆ. ವೆಂಕಟೇಶ (ಪ್ರದೇಶಾಭಿವೃದ್ಧಿ ಮತ್ತು ಕಾಡಾ ಸಚಿವರು) : ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1998 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಮಲೆನಾಡು ಪ್ರದೇಶ ಅಭಿವೃದ್ಧಿ"ಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜಸ್ವ ಖಾತೆಯಲ್ಲಿ30,00,00,000 ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

**(ಎಲ್ಲಾ ಪ್ರಸ್ತಾಪಗಳನ್ನೂ ಮಂಡಿಸಲಾಯಿತು.)**

## ಅಧ್ಯಕ್ಷರ ಅಪ್ಪಣೆ ಮೇರೆಗೆ ಪ್ರಸ್ತಾಪಿಸಲಾದ ವಿಷಯಗಳು

### ಸಿ.ಇ.ಟಿ. ಬಗ್ಗೆ

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ವಿರೋಧ ಪಕ್ಷದ ನಾಯಕರು) ಅದಕ್ಕಿಂತಲೂ ಮುಂಚೆ ಈ ಸಿ.ಇ.ಟಿ. ಬಗ್ಗೆ ತೆಗೆದುಕೊಳ್ಳುತ್ತೀರೇನು?

ಅಧ್ಯಕ್ಷರು : ಹಾಗಾದರೆ ಚರ್ಚೆಯನ್ನು ನಾಳೆ ತೆಗೆದುಕೊಳ್ಳೋಣಾ? ಚರ್ಚೆಯನ್ನು ನಾಳೆ ಮಾಡುತ್ತೀರಾ? ನಿಯಮ 69ರ ಮೇರೆಗೆ ಸಾರ್ವಜನಿಕರ ಮಹತ್ವ ಜರೂರು ವಿಷಯದ ಬಗ್ಗೆ ಅಲ್ಪಕಾಲಾವಧಿ ಚರ್ಚೆ ಇದೆ .....

### ಬೆಂಗಳೂರು ಮಹಾನಗರ ಪಾಲಿಕೆಯ ಮಹಾಪೌರರು ರಾಜೀನಾಮೆ ನೀಡಿದ್ದಾರೆಂಬ ಸುದ್ದಿ ಬಗ್ಗೆ

ಶ್ರೀ ಎಸ್. ಸುರೇಶ್‌ಕುಮಾರ್ (ರಾಜಾಜಿನಗರ) : ಅಧ್ಯಕ್ಷರೆ, ಒಂದು ನಿಮಿಷ ಮುಖ್ಯ ಮಂತ್ರಿಗಳು ಇದ್ದಾರೆ, ಬೆಳಿಗ್ಗೆ ಒಂದು ದೊಡ್ಡ ಕಾರ್ಯಕ್ರಮ ಇತ್ತು ಅದು ರದ್ದಾಯಿತು. ಬೆಂಗಳೂರಿನ ಮಹಾಪೌರರು ರಾಜೀನಾಮೆ ಕೊಟ್ಟಿದ್ದಾರೆಂದು ದಟ್ಟವಾಗಿ ಸುದ್ದಿ ಹರಡಿದೆ. ಮುಖ್ಯ ಮಂತ್ರಿಗಳು